# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು -02.**

O/o. Joint Director Building License (South) *

ಸಂಖ್ಯೆ: ಜಂನಿನಯೋ (ದ)/ಪ್ರಾ.ಪ/ಸನಿ/ 16 /2020-21

ದಿನಾಂಕ: 31-12-2020.

## ಅಂತಿಮ ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಸರ್ವೆ ಸಂಖ್ಯೆ 8/P (New Khata No. 8/1-1), ಮಾಗಡಿ ಮುಖ್ಯ ರಸ್ತೆ, ಪೇಟೆ ಚನ್ನಪ್ಪ ಇಂಡಸ್ಟ್ರಿಯಲ್ ಏರಿಯಾ, 1ನೇ ಮುಖ್ಯ ರಸ್ತೆ, ಸಜ್ಜೆಪಾಳ್ಯ ಗ್ರಾಮ, ಯಶವಂತಪುರ ಹೋಬಳಿ, ಪಶ್ಚಿಮ ವಲಯ, ವಾರ್ಡ್ ಸಂಖ್ಯೆ 103, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಟವರ್ 8, 9, 10, 11, 12, 13, 21 & 22 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಅರ್ಜಿದಾರರ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಮನವಿ ದಿನಾಂಕ: 05-11-2018.
2) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/JD South/ 0267/15-16 ದಿನಾಂಕ: 06-01-2017.
3) Tower 01 to 05 & 16 to 20 & Tower 6, 7, 14, 15 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರದ ದಿನಾಂಕ: 11-06-2018.
4) ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ದಿನಾಂಕ: 30-11-2018.

*****

ಮಾಗಡಿ ಮುಖ್ಯ ರಸ್ತೆ, ಪೇಟೆ ಚನ್ನಪ್ಪ ಇಂಡಸ್ಟ್ರಿಯಲ್ ಏರಿಯಾ, 1ನೇ ಮುಖ್ಯ ರಸ್ತೆ, ಸಜ್ಜೆಪಾಳ್ಯ ಗ್ರಾಮ, ಯಶವಂತಪುರ ಹೋಬಳಿ, ಪಶ್ಚಿಮ ವಲಯ, ವಾರ್ಡ್ ಸಂಖ್ಯೆ 103 ರಲ್ಲಿರುವ ಸರ್ವೆ ಸಂಖ್ಯೆ 8/P (New Khata No. 8/1-1) ಇಲ್ಲಿ ನಿರ್ಮಿಸುತ್ತಿರುವ Tower 01 to 05 & 16 to 22 – 2B+G+14 UF, Tower 6, 7, 8, 10, 11, 13, 14, 15 – 3B+G+14 UF, Tower 9 & 12 – 3B+G+11UF and Club House – 3B+G+1UF ಅಂತಸ್ತುಗಳ 1384 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕಛೇರಿಯಿಂದ ಎಲ್.ಪಿ ಸಂಖ್ಯೆ: BBMP/Addl.Dir/JD South/ LP 0267/15-16 ದಿ: 06-01-2017 ರಂದು ನಕ್ಷೆ ಮಂಜೂರಾತಿ ನೀಡಲಾಗಿದೆ, ಉಲ್ಲೇಖ (2) ರಂತೆ, Tower 01 to 05 & 16 to 20 & Tower 6, 7, 14, 15 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರದ ದಿನಾಂಕ: 11-06-2018 ರಂದು ನೀಡಲಾಗಿರುತ್ತದೆ. ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, ಟವರ್ 8, 9, 10, 11, 12, 13, 21 & 22 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 22-11-2018 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (4) ರಂತೆ ಅಪರ ನಿರ್ದೇಶಕರು, ನಗರ ಯೋಜನೆ ರವರು ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 29,96,000/-ಗಳನ್ನು ಅರ್ಜಿದಾರರಿಂದ ರಶೀದಿ ಸಂಖ್ಯೆ: RE-ifms624-TP/000166 ದಿನಾಂಕ: 11-12-2018 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ಟವರ್ 8, 9, 10, 11, 12, 13, 21 & 22 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

31/12/2020

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

31/12/2020 31/12/2020 31/12/2020

Office of the Joint Director Building License (South)

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

4) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

5) ನಕ್ಷೆ ಮಂಜೂರಾತಿ ನೀಡುವ ಸಮಯದಲ್ಲಿ ವಿಧಿಸಲಾಗಿರುವಂತೆ, ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವ ಮುನ್ನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಂದ ಪಡೆದ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು.

6) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

7) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಬಳಸಿಕೊಳ್ಳುವುದು.

8) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

9) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

Sattva Developers Pvt. Ltd.,
GPA Holder for M/s. Manasa Education Acadamy
# 4th Floor, Salarpuria Windsor, # 3, Ulsoor Road
Bangalore – 560 042.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು / ಸಹಾಯಕ ಕಾರ್ಯಪಾಲಕ ಅಭಿಯಂತರರು, ಗೊರಗುಂಟೆಪಾಳ್ಯ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

31/12/2020

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

31/12/2020 31/12/2020 31/12/2020